# ಅಧಿವೇಶನದಲ್ಲಿ ಉಕ ಸಮಸ್ಯೆ ಚರ್ಚೆಗೆ ಆದ್ಯತೆ

■ ವಿಜಯವಾಣಿ ಸುದ್ದಿಜಾಲ ಬೆಳಗಾವಿ

ಸುವರ್ಣ ವಿಧಾನಸೌಧದಲ್ಲಿ ಡಿಸೆಂಬರ್‌ನಲ್ಲಿ ನಡೆಯಲಿರುವ ಚಳಿಗಾಲ ಅಧಿವೇಶನದಲ್ಲಿ ಬರ, ಉತ್ತರ ಕರ್ನಾಟಕ ಭಾಗದ ಸಮಸ್ಯೆ ಕುರಿತು ಚರ್ಚೆಗೆ ಮೊದಲ ಆದ್ಯತೆ ನೀಡಲಾಗುವುದು ಎಂದು ವಿಧಾನಸಭೆ ಸಭಾಧ್ಯಕ್ಷ ಯು.ಟಿ.ಖಾದರ್ ಹೇಳಿದರು.

ನಗರದ ಸುವರ್ಣ ವಿಧಾನಸೌಧದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಈ ಬಾರಿ ಅಧಿವೇಶನ ಮಾದರಿಯಾಗಬೇಕು ಎಂಬ ಆಶಯ ನಮ್ಮದಾಗಿದ್ದು, ವಿವಿಧ 10 ಸಮಿತಿಗಳ ರಚನೆ ಮಾಡುವಂತೆ ಜಿಲ್ಲಾಧಿಕಾರಿಗೆ ಸೂಚನೆ ನೀಡಲಾಗಿದೆ. ಅಲ್ಲದೆ ಶಾಸಕರಿಗೆ ಅಗತ್ಯ ಸೌಲಭ್ಯ ಕಲ್ಪಿಸಲು ತಿಳಿಸಲಾಗಿದ್ದು, ಕಲಾಪ ವೀಕ್ಷಣೆಗೆ ಬರುವ ಜನಸಾಮಾನ್ಯರು ಹಾಗೂ ವಿದ್ಯಾರ್ಥಿಗಳಿಗೆ ಪ್ರವೇಶ ಪಾಸ್ ಸೇರಿ ಅಗತ್ಯ ವ್ಯವಸ್ಥೆ ಮಾಡಲಾಗುವುದು ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ, ಕೆಲ ಸಚಿವರಿಗೆ ಹಾಗೂ ಶಾಸಕರಿಗೆ ಬೆಳಗಾವಿಯಲ್ಲಿನ ಅಧಿವೇಶನ ಎಂದರೆ ಪ್ರತಿಭಟನೆ ಅಧಿವೇಶನ ಎಂಬ ಭಾವನೆ ಮೂಡಿದೆ.



ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಯು.ಟಿ.ಖಾದರ್, ಬಸವರಾಜ ಹೊರಟ್ಟಿ ಮಾತನಾಡಿದರು. ಶಾಸಕ ರಾಜು ಸೇಠ್ ಇದ್ದರು.

> **ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ರಾಜ್ಯಪಾಲರನ್ನು ಕರೆಯಿಸಿ ಜಂಟಿ ಅಧಿವೇಶನ ನಡೆಸಬೇಕು ಎಂಬುದು ನಮ್ಮದು ಬಹುದಿನದ ಆಶಯ. ಮುಂದಿನ ಅಧಿವೇಶನಗಳಲ್ಲಿ ಒಮ್ಮೆಯಾದರೂ ಜಂಟಿ ಅಧಿವೇಶನ ನಡೆಸಲು ಕ್ರಮ ಕೈಗೊಳ್ಳಲಾಗುವುದು. ಈ ಕುರಿತು ಮುಖ್ಯಮಂತ್ರಿಗೆ ಪ್ರಸ್ತಾವನೆ ಸಲ್ಲಿಸಲಾಗುವುದು.**
>
> | **ಬಸವರಾಜ ಹೊರಟ್ಟಿ** ವಿಧಾನ ಪರಿಷತ್ ಸಭಾಪತಿ

ಈ ಹಿನ್ನೆಲೆಯಲ್ಲಿ ರೈತರು, ನೌಕರರು ಸೇರಿ ಇನ್ನಿತರರ ಸಮಸ್ಯೆಗಳಿಗೆ ಅಧಿವೇಶನ ಮುಂಚಿತವಾಗಿ ಸಂಬಂಧಿಸಿದ ಅಧಿಕಾರಿಗಳು ಜತೆ ಚರ್ಚಿಸಿ ಪರಿಹಾರ ಕಂಡುಕೊಳ್ಳಬೇಕು. ಇದರಿಂದ ಪ್ರತಿಭಟನೆಗಳ ಸಂಖ್ಯೆ ಕಡಿಮೆಯಾಗಲಿದೆ ಎಂದು ತಿಳಿಸಿದರು.

ಅಧಿವೇಶನಕ್ಕೆ ಆಗಮಿಸುವ ಶಾಸಕರು, ಸಚಿವರ ವಸತಿಗಾಗಿ ಕೋಟ್ಯಂತರ ರೂ. ವೆಚ್ಚವಾಗುತ್ತಿದ್ದು, ಶಾಸಕ ಭವನ ನಿರ್ಮಾಣ ಮಾಡುವ ಕುರಿತು ಸರ್ಕಾರ ಶೀಘ್ರವೇ ಕ್ರಮ ಕೈಗೊಳ್ಳಲಿದೆ ಎಂಬ ನಂಬಿಕೆ ಇದೆ. ಸಕ್ಕರೆ ಆಯುಕ್ತಾಲಯ ಸೇರಿ ಹಲವು ಕಚೇರಿಗಳನ್ನು ಸುವರ್ಣ ವಿಧಾನಸೌಧದಲ್ಲಿ ಆರಂಭಿಸಲು ಸರ್ಕಾರ ಕ್ರಮ ಕೈಗೊಂಡಿದೆ ಎಂದು ತಿಳಿಸಿದರು.

**ವಿಧಾನಸಭೆಯಲ್ಲಿ ನೆಹರು ಭಾವಚಿತ್ರ?:** ಸುವರ್ಣಸೌಧದ ವಿಧಾನಸಭೆ ಸಭಾಂಗಣದಲ್ಲಿ ಹಲವು ಮಹನೀಯರ ಭಾವಚಿತ್ರಗಳ ಜತೆಗೆ ಸಾವರ್ಕರ್ ಭಾವಚಿತ್ರ ಕೂಡ ಅಳವಡಿಸಲಾಗಿದೆ. ಹಾಗಾಗಿ ಈ ಬಾರಿ ಚಳಿಗಾಲ ಅಧಿವೇಶನದಲ್ಲಿ ವಿಧಾನಸಭೆ ಮತ್ತು ವಿಧಾನ ಪರಿಷತ್ ಸಭಾಂಗಣದಲ್ಲಿ ಜವಾಹರಲಾಲ್ ನೆಹರು ಭಾವಚಿತ್ರ ಅಳವಡಿಸುವ ಕುರಿತು ಚರ್ಚಿಸಲಾಯಿತು.